## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.

## ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 238/2018

**ಫಿರ್ಯಾದಿ :** ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

- ವಿರುದ್ಧ -

**ಆರೋಪಿ/ತರು:**

1) ಚಿನ್ನಪ್ಪ ಬಿನ್ ರಾಮಕೃಷ್ಣ, 45 ವರ್ಷ,

2) ಮಂಜುನಾಥ ಬಿನ್ ಪೆರುಮಾಳ್, 45 ವರ್ಷ,

3) ರಮೇಶ ಬಿನ್ ಜಯಪಾಲ, 37 ವರ್ಷ,

4) ಪ್ರವೀಣ್ ಬಿನ್ ಮುರುಗೇಶ, 19 ವರ್ಷ,

5) ಗುಲಾಬಿ ಕೋಂ ಮಂಜು, 40 ವರ್ಷ,

6) ಚಂದ್ರಮ್ಮ ಕೋಂ ಚಿನ್ನಪ್ಪ, 38 ವರ್ಷ,

ಎಲ್ಲರೂ ವಾಸ : ಸೈದುಖಾನ್ ಗ್ರಾಮ, ಲಿಂಗದಹಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು

****

**-:ದೋಷಾರೋಪಣೆ:-**

ಶ್ರೀ ಶಿವಕುಮಾರ್.ಆರ್., ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ವಿರುದ್ದ ಮಾಡುವ ದೋಷಾರೋಪಣೆ ಏನೆಂದರೆ:-

ದಿನಾಂಕ 16.07.2020 ರಂದು ರಾತ್ರಿ 07.00 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನ ಸೈದುಖಾನ್ ಗ್ರಾಮದ ಮಾರಿಯಮ್ಮ ದೇವಸ್ಥಾನದ ಹತ್ತಿರ, ಚಾಸಾ-1 ರುಕ್ಮಿಣಿಯವರ ಅತ್ತೆಯ ಜಮೀನಿನ ವಿಭಾಗದ ವಿಚಾರವಾಗಿ ಚಾಸಾ-1, ಚಾಸಾ-4 ಮೂರ್ತಿ, ಚಾಸಾ-5 ಶಬರೀಷ ಹಾಗೂ ಆರೋಪಿತರಾದ ನೀವು ಸೇರಿಕೊಂಡು ಪಂಚಾಯಿತಿ ಮಾಡುತ್ತಿರುವಾಗ ಆರೋಪಿತರಾದ ನೀವು ಏಕೋದ್ದೇಶದಿಂದ 1 ನೇ ಆರೋಪಿಯಾದ ನೀವು ಚಾಸಾ-4 ರವರಿಗೆ ನಿನ್ನ ತಾಯಿಗೆ ಅನ್ನ ಹಾಕುವ ಯೋಗ್ಯತೆ ಇಲ್ಲದವನು ಸೂಳೆಮಗನೇ, ಬೋಳಿಮಗನೆ ಎಂದು ಅವಾಚ್ಯವಾಗಿ ಬೈದು ಅವಮಾನ ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ

ಸಂಹಿತೆ ಕಲಂ 504 ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ 1ನೇ ಆರೋಪಿಯಾದ ನೀವು ಚಾಸಾ-4 ರವರಿಗೆ ದೊಣ್ಣೆಯಿಂದ ಬೆನ್ನಿಗೆ, ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಬಿಡಿಸಲು ಬಂದ ಚಾಸಾ-1 ಮತ್ತು ಚಾಸಾ-5 ರವರಿಗೆ ಅದೇ ದೊಣ್ಣೆಯಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಮೂರನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ 1ನೇ ಆರೋಪಿಯಾದ ನೀವು ಚಾಸಾ- ರವರ ತಲೆ ಜುಟ್ಟನ್ನು ಹಿಡಿದು ಸಾರ್ವಜನಿಕ ಸ್ಥಳದಲ್ಲಿ ಎಳೆದಾಡಿ ಅವರ ಮಾನಕ್ಕೆ ಕುಂದುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನಾಲ್ಕನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ 2 ರಿಂದ 6ನೇ ಆರೋಪಿತರಾದ ನೀವು ಚಾಸಾ-5 ರವರಿಗೆ ಕೈಗಳಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಚಾಸಾ-1, 4 ಮತ್ತು 5 ರವರಿಗೆ ನೀವುಗಳು ಜಮೀನಿನ ವಿಚಾರಕ್ಕೆ ಬಂದರೆ ನಿಮ್ಮಗಳನ್ನು ಜೀವ ಸಹಿತ ಬಿಡುವುದಿಲ್ಲವೆಂದು ಕೊಲೆ ಬೆದರಿಕೆ ಹಾಕಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪಗಳ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ : 20.07.2022 **ಸಹಿ**

**(ಶಿವಕುಮಾರ್.ಆರ್.)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.**